ಹೌದು ಸರ್ಕಾರದ ಗಮನಕ್ಕೆ ಬಂದಿದೆ

ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿನ ಪಶುಆಸ್ಪತ್ರೆ ಮತ್ತು ಪಶುಚಿಕಿತ್ಸಾಲಯಗಳಲ್ಲಿ 7 ಪಶುವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇರುತ್ತವೆ. ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

1)	ಪಶು ಆಸ್ಪತ್ರೆ, ಕೊಳ್ಳೇಗಾಲ	1
2)	ಸಂಚಾರಿ ಪಶು ಚಿಕಿತ್ಸಾಲಯ ಕೊಳ್ಳೇಗಾಲ	1
3)	ಪಶು ಚಿಕಿತ್ಸಾಲಯ, ಕೌದಳ್ಳಿ	1
4)	ಪಶು ಚಿಕಿತ್ಸಾಲಯ, ಬಂಡಳ್ಳಿ	1
5)	ಪಶು ಚಿಕಿತ್ಸಾಲಯ, ಹೂಗ್ಯಂ	1
6)	ಪಶು ಚಿಕಿತ್ಸಾಲಯ, ಮೀಣ್ಯಂ	1
7)	ಪಶು ಚಿಕಿತ್ಸಾಲಯ, ಗೊಲ್ಲರದಿಂಬದ	1
	ಒಟ್ಟು:	7

ಊ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ರಾಜ್ಯದಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಿಂದ 200 ಹುದ್ದೆಗಳಿಗೆ ಪ್ರಕಟಣೆ ನೀಡಿದ್ದು, ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಪ್ರಕ್ರಿಯೆ ಪ್ರಾರಂಭವಾಗಿದೆ ಹಾಗೂ 100 ನಿವೃತ್ತ ಪಶುವೈದ್ಯರನ್ನು ಸಹ ಭರ್ತಿ ಮಾಡಲು ಅನುಮತಿ ನೀಡಲಾಗಿದ್ದು, ನೇಮಕಾರಿ ಪ್ರಕ್ರಿಯೆ ಪ್ರಾರಂಭವಾಗಬೇಕಾಗಿದೆ. ಈ ಎರಡು ಹಂತದ ನೇಮಕಾತಿ ಮಾಡುವ ಸಮಯದಲ್ಲಿ ಕೊಳ್ಳೇಗಾಲ ಕ್ಷೇತ್ರದಲ್ಲಿ ಖಾಲಿ ಇರುವ 7 ಪಶುವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಆದ್ಯತೆ ಮೇಲೆ ಪರಿಗಣಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (483)288
ಸದಸ್ಯರ ಹೆಸರು : ಶ್ರೀ ಆರ್.ಧ್ರುವನಾರಾಯಣ್
ಉತ್ತರಿಸುವವರು : (ಶ್ರಿ ಎಸ್.ಎನ್.ಕೃಷ್ಣಯ್ಯ ಶೆಟ್ಟಿ) ಮಾನ್ಯ ವಸತಿ ಮತ್ತು ಮುಜರಾಯಿ ಸಚಿವರು

ಅ) ಕೊಳ್ಳೇಗಾಲ ಪಟ್ಟಣದಲ್ಲಿರುವ ಕೊಳಚೆ ಪ್ರದೇಶವನ್ನು ಅಭಿವೃದ್ಧಿ ಪಡಿಸಲು ಸರ್ಕಾರದಿಂದ 2007-08ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವೆಷ್ಟು?

ಕೊಳ್ಳೇಗಾಲ ಪಟ್ಟಣದಲ್ಲಿರುವ ಕೊಳಚೆ ಪ್ರದೇಶವನ್ನು ಅಭಿವೃದ್ಧಿ ಪಡಿಸಲು ಸರ್ಕಾರದಿಂದ 2007-08ನೇ ಸಾಲಿನಲ್ಲಿ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.

ಆ) ಈ ಕೊಳಚೆ ಪ್ರದೇಶದವರಿಗೆ ಪುನರ್ವಸತಿ ನಿರ್ಮಾಣ ಮಾಡುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ?

ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (484)289
ಸದಸ್ಯರ ಹೆಸರು : ಶ್ರೀ ಆರ್.ಧ್ರುವನಾರಾಯಣ್ (ಕೊಳ್ಳೇಗಾಲ)
ಉತ್ತರಿಸುವ ಸಚಿವರ ಹೆಸರು : (ಶ್ರಿ ಎಸ್.ಎನ್.ಕೃಷ್ಣಯ್ಯ ಶೆಟ್ಟಿ) ಮಾನ್ಯ ವಸತಿ ಮತ್ತು ಮುಜರಾಯಿ ಸಚಿವರು

ಅ) ಸರ್ಕಾರ ಆಶ್ರಯ ಯೋಜನೆಯ ಫಲಾನುಭವಿಗಳಿಗೆ ರೂ.30,000/– ಹಾಗೂ ಡಾ: ಅಂಬೇಡ್ಕರ್ ಆವಾಸ್ ಮನೆ ಫಲಾನುಭವಿಗಳಿಗೆ ರೂ.25,000/– ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಆ) ಹಾಗಿದ್ದಲ್ಲಿ ಡಾ: ಅಂಬೇಡ್ಕರ್ ಮನೆಯ ಫಲಾನುಭವಿಗಳಿಗೆ ಅನುದಾನವನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಸರ್ಕಾರವು, 2007–08ನೇ ಸಾಲಿನಿಂದ ಡಾ: ಅಂಬೇಡ್ಕರ್ ಅಭಿವೃದ್ಧಿ ಯೋಜನೆಯ ಘಟಕ ವೆಚ್ಚವನ್ನು ರೂ.30,000/– ಕ್ಕೆ ಹೆಚ್ಚಿಸಲು ಮಂಜೂರಾತಿ ನೀಡಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (332)290
ಸದಸ್ಯರ ಹೆಸರು : ಡಾ: ಸುಧಾಕರ್ ಎಂ.ಸಿ
ಉತ್ತರಿಸುವ ಸಚಿವರು : (ಶ್ರೀ ಅರವಿಂದ ಲಿಂಬಾವಳಿ) ಮಾನ್ಯ ಉನ್ನತ ಶಿಕ್ಷಣ ಸಚಿವರು.

ಅ) ಚಿಂತಾಮಣಿ ತಾಲ್ಲೂಕಿನ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಭೋದಕರು ಹಾಗೂ ಭೋದಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಆ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳಿಂದಾಗಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗಿರುವುದು ನಿಜವೇ;